# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಪಶ್ಚಿಮ ವಲಯ, ಶ್ರೀರಾಮಮಂದಿರ ಉಪವಿಭಾಗ

## ವಾರ್ಡ್ ನಂ.98 : ಪ್ರಕಾಶ್ ನಗರ

**ದಿನಾಂಕ: 22.10.2021 ರಂದು ಬೆಳಿಗ್ಗೆ 10.30 ಗಂಟೆಗೆ ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿ, ವಾರ್ಡ್ 98 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು, ವಾರ್ಡ್ 98ರ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಎಂ.ಬಿ.ನಾಗರಾಜು | ನೋಡಲ್ ಅಧಿಕಾರಿ–ವಾರ್ಡ್ 98 |
| 2 | ಶ್ರೀ ನಂದೀಶ್.ಎಸ್ | ಕಿರಿಯ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 98 |
| 3 | ಪಿ ರವಣಯ್ಯ | ಆರೋಗ್ಯ ಪರಿವೀಕ್ಷಕರು– ವಾರ್ಡ್ 98 |
| 4 | ಬಿ.ಎಸ್.ಪ್ರವೀಣ್ ಕುಮಾರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 5 | ಎನ್.ಎಂ.ತೋಪೇಗೌಡ | ಕಂದಾಯ ಪರಿವೀಕ್ಷಕರು–ವಾರ್ಡ್ 98 |
| 6 | ಲಕ್ಷ್ಮಿ ನಾರಾಯಣ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 7 | ಹೆಚ್.ಕೆ.ನಾಗಭೂಷಣ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 8 | ಪ್ರಕಾಶ ವೈ ವಿ | ಕಿರಿಯ ಅಭಿಯಂತರರು– (ಎಲೆಕ್ಟ್ರಿಕಲ್) |
| 9 | ಎನ್.ವೆಂಕಟೇಶ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 10 | ಶ್ರೀನಿವಾಸುಲು | ಬಿ.ಡಬ್ಲ್ಯೂ.ಎಸ್.ಎಸ್,ಬಿ |
| 11 | ಚೇತನ್ ಕುಮಾರ್ ಜಿ.ಎಸ್ | ಎಲೆಕ್ಟ್ರಿಕಲ್ ಇಂಜಿನಿಯರ್ (ಕಿಯೋನಿಕ್ಸ್) |

:ನಡಾವಳಿಯ ವರದಿ:

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ನಂದೀಶ್.ಎಸ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್‌ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಮತ್ತು ವಾರ್ಡ್ ಕಮಿಟಿ ಸದಸ್ಯರಿಗೆ ಸ್ವಾಗತ ಕೋರಿದರು.

- ವಾರ್ಡ್ ಸಮಿತಿಯ ಸದಸ್ಯರಾದ ಶ್ರೀ ಹೆಚ್.ಕೆ.ನಾಗಭೂಷಣ್ ಮಾತಾನಾಡುತ್ತಾ, ವಾರ್ಡಿನಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದು, ಇದರಿಂದಾಗಿ ಸಾರ್ವಜನಿಕರ ಹಾಗೂ ಮಕ್ಕಳ ಸಂಚಾರಕ್ಕೆ ತೊಂದರೆಯಾಗಿರುತ್ತದೆ ಹಾಗೂ ರಾತ್ರಿ ವೇಳೆಯಲ್ಲಿ ಗುಂಪುಗುಂಪಾಗಿ ಬೊಗಳುತ್ತಿದ್ದು, ಇದರಿಂದಾಗೀ ಸಾರ್ವಜನಿಕರ ನಿದ್ದೆಗೆ ತೊಂದರೆಯಾಗಿರುತ್ತದೆ ಈ ಬಗ್ಗೆ ಕ್ರಮ ಕೈಗೊಳ್ಳಲು ಕೋರಿದರು.

- ಇದಕ್ಕೆ ಆರೋಗ್ಯ ಪರಿವೀಕ್ಷಕರು ಪ್ರತಿಕ್ರಿಯಿಸಿ ಈಗಾಗಲೇ ಈ ಬಗ್ಗೆ ಸಾರ್ವಜನಿಕರಿಂದ ದೂರು ಬಂದಿದ್ದು, ಬೀದಿನಾಯಿಗಳ ಹಾವಳಿಯನ್ನು ತಪ್ಪಿಸುವ ಸಲುವಾಗಿ ಬೀದಿನಾಯಿಗಳನ್ನು ಹಿಡಿದು ಚುಚ್ಚುಮದ್ದುಗಳನ್ನು ನೀಡಲಾಗುತ್ತಿದೆ. ಬೀದಿನಾಯಿಗಳನ್ನು ಹಾರೈಕೆ ಮಾಡಲು ಡಾಗ್ ಕೆನಾಲ್‌ಗಳು ಇಲ್ಲದಿರುವುದರಿಂದ ಸಂತಾನೋತ್ಪತ್ತಿ ಆಗದಂತೆ ಶಸ್ತ್ರಹರಣ ಚಿಕಿತ್ಸೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

➢ ಮಾನ್ಯ ನೋಡಲ್ ಅಧಿಕಾರಿರವರು ಸಭೆಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಪ್ರಸ್ತಾಪಿಸಿದರು.

ಇದಕ್ಕೆ ಕಿರಿಯ ಅಭಿಯಂತರರು ಮಾತನಾಡಿ, ವಾರ್ಡ್ 98ರ ವ್ಯಾಪ್ತಿಯ ಮರಿಯಪ್ಪನ ಪಾಳ್ಯ, 4ನೇ ಎಸ್ ಬ್ಲಾಕ್‌ಗಳಲ್ಲಿ ಬರುವ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಮುಚ್ಚಲಾಗಿದೆ ಎಂದು ತಿಳಿಸಿದರು.

➢ ವಾರ್ಡ್ ಸಮಿತಿಯ ಸದಸ್ಯರಾದ ಶ್ರೀ ಎನ್.ವೆಂಕಟೇಶ್ ರವರು ಮಾತಾನಾಡುತ್ತಾ, ವಾರ್ಡಿನಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ವಿ ಇಲಾಖೆ ವತಿಯಿಂದ ಹಲವು ಕಡೆಗಳಲ್ಲಿ ರಸ್ತೆಗಳನ್ನು ಅಗೆದಿದ್ದು, ಇದರಿಂದಾಗಿ ಸಾರ್ವಜನಿಕರ ಸಂಚಾರಕ್ಕೆ ತುಂಬಾ ತೊಂದರೆಯಾಗಿರುತ್ತದೆ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಹಿಂದಿನ ಸಭೆಯಲ್ಲಿ ಕೋರಲಾಗಿತ್ತು. ಆದರೆ ಬಿ.ಡಬ್ಲ್ಯೂ.ಎಸ್.ಎಸ್,ಬಿ ರವರಿಂದ ರಸ್ತೆ ಅಗೆತಗಳನ್ನು ಮುಚ್ಚಲಾಗಿರುವುದಿಲ್ಲ ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಮತ್ತೊಮ್ಮೆ ಕೋರಿದರು.

- ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಹಾಜರಿದ್ದ ಶ್ರೀನಿವಾಸುಲು ರವರು ಮಾತನಾಡಿ ರಸ್ತೆಗಳನ್ನು ಅಗೆದಿರುವ ಕಡೆಗಳಲ್ಲಿ ವೆಟ್ ಮಿಕ್ಸ್ ಅಳವಡಿಸಲಾಗಿದ್ದು, ಮಳೆಯು ಒಂದೇ ಸಮನೆ ಸುರಿಯುತ್ತಿರುವುದರಿಂದ ಡಾಂಬರು ಹಾಕಲಾಗಿರುವುದಿಲ್ಲ, ಮಳೆ ನಿಂತ ನಂತರ ಶೀಘ್ರವಾಗಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರಾದ [illegible] ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 98, ಪ್ರಕಾಶ್ ನಗರ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.98, ಪ್ರಕಾಶ್ ನಗರ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಪ್ರತಿಯನ್ನು:

1) ಮಾನ್ಯ ವಲಯ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಜಂಟಿ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ರಾಜಾಜಿನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶ್ರೀರಾಮಮಂದಿರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.98 ರವರ ಮಾಹಿತಿಗಾಗಿ

6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಾಜಿನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ
9) ಕಛೇರಿ ಕಡತಕ್ಕೆ